# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **458 (537)** |
| **ಸದಸ್ಯರ ಹೆಸರು** | | **ಶ್ರೀ ಅ. ದೇವೆಗೌಡ (ಪದವೀಧರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **21.02.2022** |
| **ಉತ್ತರಿಸಬೇಕಾದವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| (ಅ) | ಕರ್ನಾಟಕದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; | ಕರ್ನಾಟಕದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ : 440 |
| (ಆ) | ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು; | ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ: 1681 |
| (ಇ) | ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ-3) ದಿನಾಂಕ: 08.07.2020 ಹಾಗೂ ತಿದ್ದುಪಡಿ ಅಧಿಸೂಚನೆ ದಿನಾಂಕ: 19.10.2020 ರಲ್ಲಿ ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಲಾಗಿದೆ. ಸಹಾಯಕ ಪ್ರಾಧ್ಯಾಪಕರ 1242 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019, ದಿನಾಂಕ: 26.08.2021 ರಲ್ಲಿ ಅನುಮತಿ ನೀಡಲಾಗಿದೆ. ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಸ್ತುತ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಿರುತ್ತದೆ. ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಆಯ್ಕೆಪಟ್ಟಿಯನ್ನು ಸರ್ಕಾರಕ್ಕೆ ನೀಡಿದ ನಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು. |

**ಇಡಿ 60 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**